**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ತಳವಾರ್ ಸಾಬಣ್ಣ ರವರು ನಿಯಮ 330ರಡಿಯಲ್ಲಿ ಪ್ರಸ್ತಾಪಿಸಲಾಗಿರುವ ವಿಷಯಕ್ಕೆ ಉತ್ತರ**

**ಪ್ರಶ್ನೆ:**

**ಪೋಸ್ಟ್ ಮೆಟ್ರಿಕ್ ನಂತರದ ಶಿಕ್ಷಣಕ್ಕಾಗಿ ಇಂದು ಹಿಂದುಳಿದ ವರ್ಗಗಳ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಪಟ್ಟಣ/ನಗರಗಳಿಗೆ ಬರುತ್ತಿದ್ದಾರೆ.ಅವರ ಪೋಷಕರು ತೀರಾ ಬಡವರು, ಕೂಲಿ ಕೆಲಸಗಾರರಾಗಿರುವುದರಿಂದ ಶಿಕ್ಷಣಕಾಗಿ ಸರ್ಕಾರದ ಹಾಸ್ಟೆಲ್‌ಗಳನ್ನು ಅವಲಂಬಿಸಿದ್ದಾರೆ. ಆದರೆ ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳು ಸೀಟುಗಳ ಕೊರತೆ, ಮೂಲಭೂತ ಸೌಕರ್ಯಗಳ ಕೊರತೆ, ಊಟದಲ್ಲಿ ಶುಚಿತ್ವದ ಕೊರತೆ ಮುಂತಾದ ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿದ್ದಾವೆ. ಇವುಗಳಿಗೆ ಸರಕಾರವು ಯಾವ ರೀತಿಯ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಿದೆ ಎಂಬುದರ ಕುರಿತು ನಿಯಮ 330 ರ ಮೇರೆಗೆ ಸದನದಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.**

**ಹೇಳಿಕೆ:**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ 1277 ಮೆಟ್ರಿಕ್-ಪೂರ್ವ ಹಾಗೂ 1320 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಹೀಗೆ ಒಟ್ಟು 2597 ವಿದ್ಯಾರ್ಥಿನಿಲಯಗಳು ಕಾರ್ಯ ನಿರ್ವಹಿಸುತ್ತಿದ್ದು ಈ ವಿದ್ಯಾರ್ಥಿನಿಲಯಗಳಲ್ಲಿ 243836 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗಿರುತ್ತದೆ. ವಿದ್ಯಾರ್ಥಿನಿಲಯಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿ ವಿದ್ಯಾರ್ಥಿಗಳ ಅಂಕಗಳು ಮತ್ತು ಮೀಸಲಾತಿಯನುಸಾರ ಪ್ರವೇಶಾತಿಯನ್ನು ಕಲ್ಪಿಸಲಾಗುತ್ತಿದೆ.

ಪ್ರಸ್ತುತ 2024-25ನೇ ಸಾಲಿನಿಂದ ಹಿಂದುಳಿದ ವರ್ಗಗಳ ಇಲಾಖೆಯ ಮೆಟ್ರಿಕ್-ಪೂರ್ವ ಮತ್ತು ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶಾತಿಗೆ ಪರಿಷ್ಕೃತ ಪ್ರವೇಶಾತಿ ಮಾರ್ಗಸೂಚಿಗಳನ್ನು ಹೊರಡಿಸಲಾಗಿದ್ದು, ಅದರಂತೆ, ವಿದ್ಯಾರ್ಥಿನಿಲಯಗಳಲ್ಲಿ ಶೇ.50ರಷ್ಟು ಸ್ಥಾನಗಳನ್ನು ಸ್ಥಳೀಯ ವಿದ್ಯಾರ್ಥಿಗಳಿಗೆ ಮೀಸಲಾತಿಯನ್ನು ಕಲ್ಪಿಸಲಾಗಿರುತ್ತದೆ. SHP ತಂತ್ರಾಂಶದ ಮುಖಾಂತರ ಆನ್-ಲೈನ್‌ನಲ್ಲಿ ಅರ್ಜಿ ಆಹ್ವಾನಿಸಿ ನಂತರ ತಾಲ್ಲೂಕು ಮಟ್ಟದಲ್ಲಿ ಮಾನ್ಯ ಶಾಸಕರ ಅಧ್ಯಕ್ಷತೆಯಲ್ಲಿನ ಆಯ್ಕೆ ಸಮಿತಿಯ ಮೂಲಕ ವಿದ್ಯಾರ್ಥಿಗಳ ಆಯ್ಕೆ ಪಟ್ಟಿ ಸಿದ್ಧಪಡಿಸಿಕೊಂಡು ಪ್ರವೇಶಾತಿಯನ್ನು ಕಲ್ಪಿಸಲಾಗುತ್ತಿದೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವಿದ್ಯಾರ್ಥಿನಿಲಯಗಳಲ್ಲಿ ನಿಗಧಿಪಡಿಸಿರುವ ಮಂಜೂರಾತಿ ಸಂಖ್ಯೆಗನುಗುಣವಾಗಿ ಅಂಕಗಳು ಮತ್ತು ಮೀಸಲಾತಿಯ ಅನುಸಾರ ಅರ್ಹ ವಿದ್ಯಾರ್ಥಿಗಳಿಗೆ ಪ್ರವೇಶಾತಿಯನ್ನು ಕಲ್ಪಿಸಲಾಗಿದ್ದು, ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಾತಿ ದೊರಕದ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆಯಡಿ ಅನುದಾನದ ಲಭ್ಯತೆಯನುಸಾರ ಮಾಸಿಕ ರೂ.1500/- ರಂತೆ 10 ತಿಂಗಳ ಅವಧಿಗೆ ರೂ.15000/-ಗಳನ್ನು ಮಂಜೂರು ಮಾಡಲಾಗುತ್ತಿದೆ.

ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳಲ್ಲಿ ಅನುದಾನದ ಲಭ್ಯತೆಯನುಸಾರ ಅತ್ಯಂತ ಅವಶ್ಯಕವಿರುವ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿರುತ್ತದೆ. ಆದಾಗ್ಯೂ ಅಗತ್ಯವಿರುವ ಮೂಲಭೂತ ಸೌಲಭ್ಯಗಳನ್ನು ಬೇಡಿಕೆ ಹಾಗೂ ಆಯಾ ಆರ್ಥಿಕ ವರ್ಷದ ಆಯವ್ಯಯದಲ್ಲಿ ಒದಗಿಸುವ ಅನುದಾನದ ಲಭ್ಯತೆಯನುಸಾರ ಕಲ್ಪಿಸಲಾಗುತ್ತಿರುತ್ತದೆ.

ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಹೊಸದಾಗಿ ಮಂಜೂರು ಮಾಡಲಾದ 150 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಅಗತ್ಯವಿರುವ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ರೂ.20.00 ಕೋಟಿಗಳ ಅನುದಾನ ಒದಗಿಸಲಾಗಿದ್ದು, ಸದರಿ ಅನುದಾನದಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯವಿರುವ ಬೆಡ್, ಕಾಟ್, ಡೈನಿಂಗ್ ಟೇಬಲ್ ಮತ್ತು ಸೋಲಾರ್ ವಾಟರ್ ಹೀಟರ್‌ಗಳನ್ನು ಕಲ್ಪಿಸಲಾಗಿರುತ್ತದೆ.

ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಜಿಲ್ಲಾ ವಲಯದಲ್ಲಿ ವಿದ್ಯಾರ್ಥಿ ನಿಲಯಗಳ ನಿರ್ವಹಣೆಗೆ ಒದಗಿಸಲಾದ ಅನುದಾನದಲ್ಲಿ ಅನುದಾನದ ಲಭ್ಯತೆಯನುಸಾರ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗುವುದು ಹಾಗೂ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಿಂದುಳಿದ ವರ್ಗಗಳ ಫಲಾನುಭವಿಗಳಿಗೆ/ಕಲ್ಯಾಣ ಕಾರ್ಯಕ್ರಮಗಳಿಗೆ ಶೇ.7.25 ರಷ್ಟು ಅನುದಾನವನ್ನು ಮೀಸಲಿರಿಸಲಾಗಿದ್ದು, ಸದರಿ ಅನುದಾನದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಅಗತ್ಯವಿರುವ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಅನುದಾನವನ್ನು ವಿನಿಯೋಗಿಸಲು ನಗರಾಭಿವೃದ್ಧಿ ಇಲಾಖೆಯನ್ನು ಕೋರಲಾಗಿರುತ್ತದೆ.

ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿನ ನಿಲಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಭೋಜನಾ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತಿದೆ. ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಸರಬರಾಜು ಮಾಡಲಾಗುತ್ತಿರುವ ಆಹಾರ ಪದಾರ್ಥಗಳ ಗುಣಮಟ್ಟವನ್ನು ಉತ್ತಮಪಡಿಸಲು, ಸಕಾಲದಲ್ಲಿ ತಾಜಾ ತರಕಾರಿ ಮತ್ತು ಗುಣಮಟ್ಟದ ಆಹಾರ ಪದಾರ್ಥಗಳನ್ನು ವಿದ್ಯಾರ್ಥಿನಿಲಯಗಳ ಬಾಗಿಲಿಗೆ ಸರಬರಾಜು ಮಾಡಲು ಹಾಗೂ ಟೆಂಡರ್ ಪ್ರಕ್ರಿಯೆಯನ್ನು ಸರಳೀಕರಣಗೊಳಿಸಲು ಈ ಹಿಂದೆ ಇದ್ದ ತಾಲ್ಲೂಕುವಾರು ಟೆಂಡರ್ ಆಹ್ವಾನಿಸುವ ಬದಲು ಜಿಲ್ಲೆಗೆ ಎರಡು ವರ್ಷಗಳ ಅವಧಿಗೆ ಒಂದೇ ಟೆಂಡರ್ ಆಹ್ವಾನಿಸಲು ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 499 ಬಿಎಂಎಸ್ 2023, ದಿನಾಂಕ: 22.01.2024 ರಲ್ಲಿ ಆದೇಶಿಸಲಾಗಿರುತ್ತದೆ. ಈ ಸಂಬಂಧ ಸರ್ಕಾರದ ಪತ್ರ ಸಂಖ್ಯೆ: ಬಿಸಿಡಬ್ಲ್ಯೂ 499 ಬಿಎಂಎಸ್ 2023, ದಿನಾಂಕ: 01.07.2024 ರಲ್ಲಿ ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

ಟೆಂಡರ್ ಮಾರ್ಗಸೂಚಿಗಳಲ್ಲಿ ಸರಬರಾಜುದಾರರು ಆಹಾರ ಸಾಮಗ್ರಿಗಳನ್ನು ವಿದ್ಯಾರ್ಥಿ ನಿಲಯಗಳ ಬಾಗಿಲಿಗೆ ಸರಬರಾಜು ಮಾಡುವುದನ್ನು ಖಚಿತಪಡಿಸಿಕೊಳ್ಳಲು ಸರಬರಾಜು ಮಾಡುವ ವಾಹನಗಳಿಗೆ ಕಡ್ಡಾಯವಾಗಿ GPS ಸಾಧನವನ್ನು ಅಳವಡಿಸಲು ಸೂಚಿಸಲಾಗಿರುತ್ತದೆ. ವಿದ್ಯಾರ್ಥಿನಿಲಯಗಳಿಗೆ ಸರಬರಾಜು ಮಾಡುವ ಆಹಾರ ಪದಾರ್ಥಗಳ ಗುಣಮಟ್ಟ ಪರಿಶೀಲನೆ ಮತ್ತು ಉತ್ತಮ ಆಹಾರ ಸಾಮಗ್ರಿಗಳನ್ನು ವಿದ್ಯಾರ್ಥಿನಿಲಯದ ಬಾಗಿಲಿಗೆ ಸರಬರಾಜು ಮಾಡುವುದನ್ನು ಪರಿಶೀಲಿಸಲು ಹಾಗೂ ಮೇಲುಸ್ತುವಾರಿ ನಡೆಸಲು ಆಯಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಆಹಾರ ಗುಣಮಟ್ಟ ಪರಿಶೀಲನಾ ಮತ್ತು ಮೇಲುಸ್ತುವಾರಿ ಸಮಿತಿಯನ್ನು ರಚಿಸಲಾಗಿರುತ್ತದೆ., ವಿದ್ಯಾರ್ಥಿಗಳಿಗೆ ಸರಬರಾಜು ಆಗುತ್ತಿರುವ ಆಹಾರ ಪದಾರ್ಥಗಳಲ್ಲಿ ಪ್ರತಿ ಮೂರು ತಿಂಗಳಿಗೊಮ್ಮೆ ಆಯಾ ಜಿಲ್ಲೆಯಲ್ಲಿನ ಯಾವುದಾದರೂ 10 ವಿದ್ಯಾರ್ಥಿನಿಲಯಗಳ ಆಹಾರ ಪದಾರ್ಥಗಳನ್ನು Random ಆಗಿ ಆಯ್ಕೆ ಮಾಡಿಕೊಂಡು ಲ್ಯಾಬ್ ಟೆಸ್ಟ್ ಗೆ ಸಲ್ಲಿಸಿ ಗುಣಮಟ್ಟವನ್ನು ಖಾತ್ರಿ ಪಡಿಸಿಕೊಳ್ಳಲಾಗುತ್ತಿದೆ.

ಮುಂದುವರೆದು ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ಸರ್ಕಾರದದಿಂದ ನಿಗಧಿಪಡಿಸಿರುವ ಮಾಸಿಕ ಆಹಾರ ವೆಚ್ಚದಂತೆ ವಲಯವಾರು ನಿಗಧಿಪಡಿಸಲಾಗಿರುವುದೆಂದು ಚಾರ್ಟ್‌ನ ಅನುಸಾರ ಉತ್ತಮ ಗುಣಮಟ್ಟದ ಆಹಾರವನ್ನು ವಿದ್ಯಾರ್ಥಿಗಳಿಗೆ ಒದಗಿಸಲಾಗುತ್ತಿರುತ್ತದೆ.

**ಸಂಖ್ಯೆ: ಬಿಸಿಡಬ್ಲ್ಯೂ 271 ಬಿಎಂಎಸ್ 2025**

**(ಶಿವರಾಜ. ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.